# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1159 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಆರ್.ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 07/03/2022 |
| ಉತ್ತರಿಸುವ ಸಚಿವರು | : | ಪ್ರವಾಸೋದ್ಯಮ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು |

*****

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2016-17ನೇ ಸಾಲಿನ ಬಜೆಟ್‌ನಲ್ಲಿ ತುಮಕೂರು ಜಿಲ್ಲೆಯ ಮಧುಗಿರಿ ಏಕಶಿಲ ಬೆಟ್ಟಕ್ಕೆ ಪ್ರವಾಸೋದ್ಯಮ ಇಲಾಖೆಯಿಂದ ಕೇಬಲ್ ಕಾರ್ ಅಳವಡಿಸಲು ವಿಶೇಷ ಅನುದಾನ ನೀಡಲಾಗಿದೆಯೇ; | 2016-17ನೇ ಸಾಲಿನ ಆಯವ್ಯಯದಲ್ಲಿ ತುಮಕೂರು ಜಿಲ್ಲೆಯ ಮಧುಗಿರಿ ಏಕಶಿಲ ಬೆಟ್ಟಕ್ಕೆ ಪ್ರವಾಸೋದ್ಯಮ ಇಲಾಖೆಯಿಂದ ಕೇಬಲ್‌ಕಾರ್ ಅಳವಡಿಸಲು ಯಾವುದೇ ವಿಶೇಷ ಅನುದಾನ ನೀಡಲಾಗಿಲ್ಲ.<br><br>ಆದರೆ, 2015-16ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 452ರಲ್ಲಿ ಜಂಟಿ ಸಹಭಾಗಿತ್ವ ಮತ್ತು ಪಿಪಿಪಿ ಮಾರ್ಗದಲ್ಲಿ ಬೃಹತ್ ಪ್ರವಾಸೋದ್ಯಮ ಯೋಜನೆಗಳನ್ನು ಅಭಿವೃದ್ಧಿಪಡಿಸಲಾಗುವುದೆಂದು ಘೋಷಿಸಲಾಗಿದ್ದು, ಅದರಲ್ಲಿ ತುಮಕೂರು ಜಿಲ್ಲೆಯ ಮಧುಗಿರಿ ಏಕಶಿಲ ಬೆಟ್ಟದಲ್ಲಿ ಕೇಬಲ್ ಕಾರ್ ಅಳವಡಿಸುವುದನ್ನು ಪ್ರಸ್ತಾಪಿಸಲಾಗಿದೆ. ಇದು ಪಿಪಿಪಿ ಯೋಜನೆಯಾಗಿರುವುದರಿಂದ, ಯಾವುದೇ ವಿಶೇಷ ಅನುದಾನ ಬಿಡುಗಡೆಯಾಗಿರುವುದಿಲ್ಲ. |
| ಆ) | ಹಾಗಿದ್ದಲ್ಲಿ, ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ; | ಕಾಮಗಾರಿ ಪ್ರಾರಂಭವಾಗಿರುವುದಿಲ್ಲ. |
| ಇ) | ಈ ಕಾಮಗಾರಿಯು ಪ್ರಾರಂಭವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಈ ಯೋಜನೆಯನ್ನು ಕಾರ್ಯಗತಗೊಳಿಸುವ ನಿಟ್ಟಿನಲ್ಲಿ ಈ ಕೆಳಗಿನಂತೆ ಕ್ರಮಕೈಗೊಳ್ಳಲಾಗಿದೆ: |
| ಈ) | ಬಂದಿದ್ದಲ್ಲಿ, ಕಾಮಗಾರಿಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | • ಜಿಲ್ಲಾಧಿಕಾರಿಗಳು, ತುಮಕೂರುರವರಿಂದ ಮಧುಗಿರಿ ತಾಲ್ಲೂಕು, ಕಸಬಾ ಹೋಬಳಿ, ಹರಿಹರ ಕೊಪ್ಪ ಗ್ರಾಮದ ಸ.ನಂ.7ರಲ್ಲಿ 9.20 ಗುಂಟೆ ಜಮೀನನ್ನು ಮಂಜೂರು ಮಾಡಿಸಿಕೊಳ್ಳಲಾಗಿದೆ. ಈ ಭೂಮಿ ಮಂಜೂರಾತಿಗೆ ಅರಣ್ಯ ಸಂರಕ್ಷಣಾಧಿಕಾರಿ, ತುಮಕೂರು ವಿಭಾಗರವರಿಂದ ನಿರಾಕ್ಷೇಪಣಾ ಪತ್ರ ಪಡೆಯಲಾಗಿದೆ.<br>• ಯೋಜನೆಯ ವಿಸ್ತೃತ ವರದಿಯನ್ನು ಮೆ. ಧಾರಶಾರವರಿಂದ ತಯಾರಿಸಿಕೊಳ್ಳಲಾಗಿದೆ. ಸದರಿ ವರದಿಯನ್ನು ಭಾರತೀಯ ಪುರಾತತ್ವ ಇಲಾಖೆರವರಿಗೆ ಸಲ್ಲಿಸಲಾಗಿದೆ. |

| | | |
|---|---|---|
| | | • ಸದರಿ ಪ್ರದೇಶವು ಭಾರತೀಯ ಪುರಾತತ್ವ ಇಲಾಖೆಯ ಅಧಿಕಾರ ವ್ಯಾಪ್ತಿಗೆ ಒಳಪಟ್ಟಿದ್ದು, ಈ ಪ್ರದೇಶದಲ್ಲಿ ಯಾವುದೇ ಸಂರಕ್ಷಣಾ/ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವ ಮೊದಲು ಭಾರತೀಯ ಪುರಾತತ್ವ ಇಲಾಖೆಯಿಂದ ನಿರಾಕ್ಷೇಪಣಾ ಪತ್ರವನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ.<br>• ಈ ಯೋಜನೆಯನ್ನು ಪಿಪಿಪಿ ಮಾದರಿಯಲ್ಲಿ ಕೈಗೊಳ್ಳಲು ವಹಿವಾಟು ಸಲಹೆಗಾರರನ್ನು ನೇಮಕ ಮಾಡಲು 2 ಬಾರಿ ಟೆಂಡರ್ ಕರೆಯಲಾಗಿದ್ದು, ಸೂಕ್ತ ಸ್ಪಂದನೆ ದೊರೆಯದ ಕಾರಣ ಟೆಂಡರ್ ಪ್ರಕ್ರಿಯೆಯನ್ನು ರದ್ದುಪಡಿಸಲಾಗಿದೆ.<br>• ಈ ಮಧ್ಯೆ ಕೇಂದ್ರ ಸರ್ಕಾರದ ನೀತಿ ಆಯೋಗವು ಸೆಪ್ಟೆಂಬರ್ 2020ರಲ್ಲಿ ರೋಪ್‌ವೇ ಅಳವಡಿಕೆಗೆ Model Concession Agreement ತಯಾರಿಸಿದ್ದು, ಇದನ್ನು ಆಧರಿಸಿ ಪ್ರಥಮ ಹಂತದಲ್ಲಿ ನಂದಿಗಿರಿಧಾಮಕ್ಕೆ ದಿನಾಂಕ:28.02.2022ರಂದು ಟೆಂಡರ್ ಕರೆಯಲಾಗಿದೆ. ಈ ಟೆಂಡರ್ ಪ್ರಕ್ರಿಯೆಯ ಅನುಭವವು ಮಧುಗಿರಿ ಏಕಶಿಲಾ ಬೆಟ್ಟದ ಟೆಂಡರ್ ಪ್ರಕ್ರಿಯೆಗೆ ಮಾರ್ಗದರ್ಶಕವಾಗುವುದೆಂದು ನಿರೀಕ್ಷಿಸಲಾಗಿದೆ.<br>• ಸದರಿ ಏಕಶಿಲ ಬೆಟ್ಟದಲ್ಲಿ ರೋಪ್ ವೇ ಅಳವಡಿಸುವ ಯೋಜನೆಗೆ ಭಾರತೀಯ ಪುರಾತತ್ವ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ದೊರೆತ ನಂತರ ಆರ್ಥಿಕ ಹಾಗೂ ತಾಂತ್ರಿಕ ಕಾರ್ಯಸಾಧ್ಯತೆಗಳನ್ನು ಪರಿಶೀಲಿಸಿ ಪಿ.ಪಿಪಿ ಮಾದರಿಯಲ್ಲಿ ಅನುಷ್ಠಾನಗೊಳಿಸುವ ಬಗ್ಗೆ ಸಾಧ್ಯಸಾಧ್ಯತೆಗಳನ್ನು ಪರಿಶೀಲಿಸಲಾಗುವುದು. |

ಸಂಖ್ಯೆ: ಟಿಓಆರ್ 80 ಟಿಡಿವಿ 2022

(ಆನಂದ್ ಸಿಂಗ್)
ಪ್ರವಾಸೋದ್ಯಮ, ಜೀವಿಶಾಸ್ತ್ರ ಮತ್ತು
ಪರಿಸರ ಸಚಿವರು